# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 594 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 11-07-2023. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಗೆ ಒಟ್ಟು ಎಷ್ಟು ರೈತರು ಹನಿ ನೀರಾವರಿ ಯೋಜನೆಯಡಿ ಸಹಾಯಧನ ಪಡೆಯಲು ಅರ್ಜಿ ಸಲ್ಲಿಸಿರುತ್ತಾರೆ. | 2022-23ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಬೀದರ್ ಜಿಲ್ಲೆಯಲ್ಲಿ ಒಟ್ಟು 620 ರೈತರು ಹನಿ ನೀರಾವರಿ ಯೋಜನೆಯಡಿ ಸಹಾಯಧನ ಪಡೆಯಲು ಅರ್ಜಿ ಸಲ್ಲಿಸಿರುತ್ತಾರೆ. |
| ಆ | ಅರ್ಜಿ ಸಲ್ಲಿಸಿದ ರೈತರೆಲ್ಲರಿಗೂ ಸಹಾಯಧನ ಬಿಡುಗಡೆ ಮಾಡಲಾಗಿದೆಯೇ: ಇಲ್ಲದಿದ್ದಲ್ಲಿ ಕಾರಣವೇನು? | ಅರ್ಜಿ ಸಲ್ಲಿಸಿದ 620 ರೈತರಲ್ಲಿ 557 ರೈತರಿಗೆ ಸಹಾಯಧನ ಬಿಡುಗಡೆ ಮಾಡಲಾಗಿರುತ್ತದೆ. ಇನ್ನುಳಿದ 63 ರೈತರ ತಾಕುಗಳಲ್ಲಿ ಮಾರ್ಚ್ ಮಾಹೆಯ ಅಂತ್ಯದೊಳಗಾಗಿ ಹನಿ ನೀರಾವರಿ ಘಟಕಗಳ ಅಳವಡಿಕೆಯಾಗದ ಕಾರಣ ಸಹಾಯಧನ ಬಿಡುಗಡೆ ಮಾಡಿರುವುದಿಲ್ಲ. |
| ಇ | ಸಹಾಯಧನ ಪಡೆಯಲು ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು? (ವಿವರ ನೀಡುವುದು) | **ಹನಿ ನೀರಾವರಿ ಯೋಜನೆಯಡಿ ಸಹಾಯಧನ ಪಡೆಯಲು ನಿಗದಿಪಡಿಸಿರುವ ಮಾನದಂಡಗಳು ಕೆಳಕಂಡಂತಿದೆ.**<br>1. ಫಲಾನುಭವಿಗಳು ರೈತರಾಗಿದ್ದು, ಜಮೀನು ಅವರ ಹೆಸರಿನಲ್ಲಿರಬೇಕು ಹಾಗೂ ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರಾಗಿರಬೇಕು ಅಥವಾ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಉದ್ದೇಶಿಸಿರಬೇಕು.<br>2. ರೈತರ ತಾಕಿನಲ್ಲಿ ನೀರಾವರಿ ಸೌಲಭ್ಯದ ಮೂಲ ಇರಬೇಕು ಹಾಗೂ ಹನಿ/ತುಂತುರು ನೀರಾವರಿಗೆ ಯೋಗ್ಯವಿರುವಂತಹ ನೀರನ್ನು ಹೊಂದಿರಬೇಕು.<br>3. ಹನಿ/ತುಂತುರು ನೀರಾವರಿ ಘಟಕಗಳು ಕಾರ್ಯನಿರ್ವಹಿಸಲು ಅವಶ್ಯವಿರುವ ವಿದ್ಯುಚ್ಛಕ್ತಿ ಅಥವಾ ಇತರೆ ಶಕ್ತಿಮೂಲಗಳನ್ನು ಹೊಂದಿರಬೇಕು.<br>4. ತನ್ನ ಸ್ವಂತ ನೀರಾವರಿ ಮೂಲ ಇಲ್ಲದಿದ್ದಲ್ಲಿ ಬೇರೆ ರೈತರಿಂದ ಈ ಸಂಬಂಧ ಒಪ್ಪಿಗೆ ಪತ್ರ ಪಡೆದು ಸಲ್ಲಿಸಬೇಕು.<br>5. ಪ್ರತಿ ಫಲಾನುಭವಿಗೆ 5 ಹೆಕ್ಟೇರ್ ಪ್ರದೇಶದವರೆಗೆ ಸಹಾಯಧನ ನೀಡಲಾಗುತ್ತಿದೆ.<br>6. 2022-23 ರಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ರೈತರಿಗೆ 2.00 ಹೆಕ್ಟೇರ್‌ವರೆಗೆ ಶೇ.90ರಷ್ಟು ಹಾಗೂ ಇತರೆ ರೈತರಿಗೆ 2.00 ಹೆಕ್ಟೇರ್‌ವರೆಗೆ ಶೇ.75 ರಷ್ಟು ಮತ್ತು 2.00 ಹೆಕ್ಟೇರ್ ಮೇಲ್ಪಟ್ಟು 5.00 ಹೆಕ್ಟೇರ್‌ವರೆಗೂ ಶೇ.45 ರಷ್ಟು ಸಹಾಯಧನವನ್ನು ನೀಡಲಾಗಿದೆ. |

**HORTI 237 HGM 2023**

**(ಎಸ್.ಎಸ್.ಮಲ್ಲಿಕಾರ್ಜುನ್)**
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು

C:\Users\steno-us-horti\Desktop\LCQ 11.07.2023\LCQ-594\Reply LCQ-594.docx